**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಕಾವೇರಿ ಭವನದ ಎದುರು, ಕೆ.ಜಿ.ರಸ್ತೆ, ಬೆಂಗಳೂರು–560 009**

ಸಂಖ್ಯೆ: ಸಿಎಸಿ–04/TET-2022/1/2021–22 ದಿನಾಂಕ:25–10–2022

## ಪ್ರಕಟಣೆ

ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ (KARTET-2022) ದಿನಾಂಕ: 06–11–2022ರ ಭಾನುವಾರದಂದು ರಾಜ್ಯದಾದ್ಯಂತ ಎರಡು ಅಧಿವೇಶನಗಳಲ್ಲಿ (ಪ್ರತ್ರಿಕೆ–1 ಮೊದಲ ಅಧಿವೇಶನ ಮತ್ತು ಪತ್ರಿಕೆ–2 ಮಧ್ಯಾಹ್ನದ ಅಧಿವೇಶನ) ನಡೆಯಲಿದ್ದು, ಅಧಿಸೂಚನೆಯಂತೆ ನಿಗದಿತ ಶುಲ್ಕ ಪಾವತಿಸಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ಎಲ್ಲಾ ಅಭ್ಯರ್ಥಿಗಳು ದಿನಾಂಕ: **25–10–2022** ರಿಂದ ತಮ್ಮ ಪ್ರವೇಶ ಪತ್ರವನ್ನು ಇಲಾಖಾ ವೆಬ್‌ಸೈಟ್ https://schooleducation.kar.nic.in ನಲ್ಲಿ ಲಭ್ಯವಿರಿಸಿದೆ. ಅಭ್ಯರ್ಥಿಗಳು ತಮ್ಮ User Id ಮತ್ತು Password ಅನ್ನು ನಮೂದಿಸಿ download ಮಾಡಿಕೊಳ್ಳಲು ತಿಳಿಸಿದೆ.

**KARTET-2022ರ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ನೀಡಲಾದ ಸೂಚನೆಗಳನ್ನು** ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದ್ದು, ಅಭ್ಯರ್ಥಿಗಳು ಸೂಚನಾ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು, ಕೂಲಂಕಷವಾಗಿ ಓದಿ ಅರ್ಥೈಸಿಕೊಂಡು, ಅದರಂತೆ ಸಿದ್ಧತೆಯೊಂದಿಗೆ ಪರೀಕ್ಷೆಗೆ ಹಾಜರಾಗುವಂತೆ ತಿಳಿಸಿದೆ.

ಆಯಾ ಜಿಲ್ಲೆಯ ಪರೀಕ್ಷಾ ನೋಡಲ್ ಅಧಿಕಾರಿಗಳ ದೂರವಾಣಿ ಸಂಖ್ಯೆಗಳನ್ನೊಳಗೊಂಡ ಪಟ್ಟಿಯನ್ನೂ ಸಹ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದ್ದು, ಪರೀಕ್ಷಾ ಕೇಂದ್ರಗಳಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಳ ಅಗತ್ಯವಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

Sd/-
ವಿಶೇಷಾಧಿಕಾರಿ
ಕೇಂದ್ರೀಕೃತ ದಾಖಲಾತಿ ಘಟಕ